ಪ್ರವಾಸೋದ್ಯಮ ಸ್ಥಳಗಳನ್ನು ಅಭಿವೃದ್ಧಿ ಪಡಿಸುವುದು

194 (458) ಶ್ರೀ ನರೇಂದ್ರ ಬಾಬು.ನೆಲ. (ಮಹಾಲಕ್ಷ್ಮಿ ಲೇಔಟ್) : ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಯಾವ ಯಾವ ಸ್ಥಳಗಳನ್ನು ಪ್ರವಾಸೋದ್ಯಮ ಸ್ಥಳಗಳೆಂದು ಗುರುತಿಸಿದೆ; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು);

ಆ) ಈ ಸ್ಥಳಗಳ ಅಭಿವೃದ್ಧಿಗಾಗಿ ಸರ್ಕಾರ ಬಿಡುಗಡೆ ಮಾಡಿರುವ ಹಣವೆಷ್ಟು ಹಾಗೂ ಖರ್ಚಾಗಿರುವ ಹಣವೆಷ್ಟು (ಮೂರು ವರ್ಷಗಳ ಮಾಹಿತಿ ನೀಡುವುದು);

ಇ) ಉಳಿದಿರುವ ಅನುದಾನದಲ್ಲಿ ಖರ್ಚು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳಾವುವು (ಮಾಹಿತಿ ನೀಡುವುದು)?

ಶ್ರೀ ಜೆ.ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು) :

ಅ) ರಾಜ್ಯದಲ್ಲಿರುವ ಪ್ರವಾಸಿ ತಾಣಗಳನ್ನು (ಜಿಲ್ಲಾವಾರು ಹಾಗೂ ತಾಲ್ಲೂಕುವಾರು) ಗುರುತಿಸಲಾಗಿದ್ದು, ಅದರ ಪಟ್ಟಿಯನ್ನು ಲಗತ್ತಿಸಲಾಗಿದೆ. ಈ ತಾಣಗಳನ್ನು ವಿಧಾನಸಭಾ ಕ್ಷೇತ್ರವಾರು ವಿಂಗಡಿಸಿರುವುದಿಲ್ಲ.

ಆ) ಪ್ರವಾಸಿ ಸ್ಥಳಗಳ ಬಳಿ ಅಭಿವೃದ್ಧಿಗಾಗಿ ಸರ್ಕಾರವು ಇಲಾಖೆಗೆ ವಿವಿಧ ಲೆಕ್ಕ ಶೀರ್ಷಿಕೆಗಳ ಅಡಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಒದಗಿಸಲಾದ ಅನುದಾನದ ವಿವರಗಳು ಕೆಳಗಿನಂತಿವೆ.

(ಲಕ್ಷಗಳಲ್ಲಿ)

ಕ್ರ ಸಂ.	ವರ್ಷ	ಅನುದಾನ	ವೆಚ್ಚ
01	2006–07	3400.00	3397.83
02	2007–08	11982.49	7555.93
03	2008–09	9375.00	9314.65

ಇ) ಉಳಿದ ಅನುದಾನವನ್ನು ಆಯಾ ಸಾಲಿನ ಅಂತ್ಯದಲ್ಲಿ ಅದ್ಯಾರ್ಪಿಸಲಾಗುವುದು.